ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 22–09–2021

# ಮಾಧ್ಯಮ ಆಹ್ವಾನ
# Media Invitation

## 1. ನೂತನ ಲಿಡ್‌ಕರ್ ಮಾರಾಟ ಮಳಿಗೆ ಪ್ರಾರಂಭ:

**ಚಾಲನೆ:**
**ಕೋಟ ಶ್ರೀನಿವಾಸ ಪೂಜಾರಿ,**
**ಮಾನ್ಯ ಸಮಾಜ ಕಲ್ಯಾಣ ಸಚಿವರು ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು, ಕರ್ನಾಟಕ ಸರ್ಕಾರ**

**ಪ್ರೊ ಎನ್. ಲಿಂಗಣ್ಣ**
**ಮಾಯಕೊಂಡ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಲಿಡ್‌ಕರ್ ಅಧ್ಯಕ್ಷರು.**

**ದಿನಾಂಕ: 23–09–2021, ಗುರುವಾರ, ಸಮಯ: ಬೆಳಿಗ್ಗೆ 09.00 ಗಂಟೆಗೆ**

**ಸ್ಥಳ: ಡಾ.ಬಾಬು ಜಗಜೀವನರಾಂ ಲಿಡ್‌ಕರ್ ಭವನ, 2ನೇ ಮಹಡಿ, ಮಿಲ್ಲರ್ಸ್ ಟ್ಯಾಂಕ್ ಬಂಡ್ ಏರಿಯಾ, ವಸಂತನಗರ, ಬೆಂಗಳೂರು.**

## 2. ಅಮೃತ ಗ್ರಾಮ ಪಂಚಾಯಿತಿ ಯೋಜನೆಯ ಉದ್ಘಾಟನಾ ಸಮಾರಂಭ:

**ಕಲಬುರ್ಗಿಯ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮ್ಭಿಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಪ್ರಾದೇಶಿಕ ಕೇಂದ್ರ, ಕಟ್ಟಡದ ಉದ್ಘಾಟನೆ (ವರ್ಚುವಲ್ ಮೂಲಕ)**
ಬಸವರಾಜ ಎಸ್ ಬೊಮ್ಮಾಯಿ,
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

**ಅಮೃತ ಗ್ರಾಮ ಪಂಚಾಯಿತಿ ಯೋಜನೆಯ ಉದ್ಘಾಟನೆ**
ಗಿರಿರಾಜ್ ಸಿಂಗ್
ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಕೇಂದ್ರ ಸಚಿವರು, ಭಾರತ ಸರ್ಕಾರ.

**ಅಭಿವೃದ್ಧಿ ಯೋಜನೆಗಳ ಛಾಯಾಚಿತ್ರಗಳ ಪ್ರದರ್ಶನ ಉದ್ಘಾಟನೆ**
ಕೆ.ಎಸ್.ಈಶ್ವರಪ್ಪ
ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಕೇಂದ್ರ ಸಚಿವರು, ಕರ್ನಾಟಕ ಸರ್ಕಾರ.

**ಎನ್.ಆರ್.ಎಲ್.ಎಂ.ಫಲಾನುಭವಿಗಳಿಗೆ ಸೌಲಭ್ಯಗಳ ವಿತರಣೆ**
ಡಾ: ಸಿ.ಎನ್.ಅಶ್ವಥ್ ನಾರಾಯಣ

ಮಾನ್ಯ ಉನ್ನತ ಶಿಕ್ಷಣ, ಐ.ಟಿ–ಬಿ.ಟಿ. ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಸಚಿವರು, ಕರ್ನಾಟಕ ಸರ್ಕಾರ.

**ದಿನಾಂಕ: 23–09–2021, ಗುರುವಾರ, ಸಮಯ: ಬೆಳಿಗ್ಗೆ 09.30 ಗಂಟೆಗೆ**

**ಸ್ಥಳ: ಬ್ಯಾಂಕ್ವೆಟ್ ಹಾಲ್, ವಿಧಾನಸೌಧ, ಬೆಂಗಳೂರು.**

3. **ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಕೃಷಿ ಸ್ಮಾರ್ಟ್ ಕೇಂದ್ರಗಳನ್ನು ತೆರೆಯುವ ಮೂಲಕ ಕೃಷಿಯಲ್ಲಿ ನೂತನ ಆವಿಷ್ಕಾರ ಹಾಗೂ ಅಭಿವೃದ್ಧಿ ಸಾಧಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಹಾಗೂ ಹೆಕ್ಸಗಾನ್ ಮ್ಯಾನ್ಯುಫ್ಯಾಕ್ಚರಿಂಗ್ ಇಂಟಲಿಜೆನ್ಸ್ ಇಂಡಿಯಾ ಕಂಪೆನಿ ಒಡಂಬಡಿಕೆ ಮಾಡಲಿದೆ.**

   **ಬಿ.ಸಿ.ಪಾಟೀಲ್, ಕೃಷಿ ಸಚಿವರು.**

   **ದಿನಾಂಕ : 23–09–2021, ಗುರುವಾರ, ಸಮಯ: ಮಧ್ಯಾಹ್ನ 3.00 ಗಂಟೆಗೆ**
   **ಸ್ಥಳ: ಕೊಠಡಿ ಸಂಖ್ಯೆ 123, ವಿಕಾಸ ಸೌಧ, ಬೆಂಗಳೂರು.**

4. **ಪತ್ರಿಕಾಗೋಷ್ಠಿ**
   **ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಬಹುಶಿಸ್ತೀಯ ಮಹಿಳಾ ಘಟಕ ಕಾಲೇಜಿನ ಸ್ನಾತಕ ಕೋರ್ಸುಗಳ ಪ್ರವೇಶ ಹಾಗೂ ಸಂಯೋಜಿತ ಕಾಲೇಜುಗಳಲ್ಲಿ ಸ್ನಾತಕೋತ್ತರ ಕೋರ್ಸುಗಳ ಪ್ರವೇಶ ಕುರಿತು:**

   **ದಿನಾಂಕ: 23–09–2021 ಗುರುವಾರ, ಸಮಯ: ಮಧ್ಯಾಹ್ನ 3.30 ಗಂಟೆಗೆ**
   **ಸ್ಥಳ: ಜ್ಞಾನಜ್ಯೋತಿ ಸಭಾಂಗಣ, ಬೋರ್ಡ್ ರೂಂ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಬೆಂಗಳೂರು.**

# ಪತ್ರಿಕಾ ಪ್ರಕಟಣೆ

**PRESS RELEASE**

## ಗುತ್ತಿಗೆ ಪಡೆದವರಿಗೆ ಸರ್ಕಾರದ ಮೌಲ್ಯ ಆಧರಿಸಿ ಸರ್ಕಾರಿ ಜಮೀನು ನೀಡಲು ಚಿಂತನೆ

**– ಸಚಿವ ಆರ್. ಅಶೋಕ್.**

ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ)

ಸರ್ಕಾರದ ಜಮೀನುಗಳನ್ನು ಗುತ್ತಿಗೆದಾರರು ಲೀಸ್ ಮೇಲೆ ಪಡೆದಿದ್ದು, ಲೀಸ್ ಅವಧಿ ಮುಗಿದರೂ ಸರ್ಕಾರಕ್ಕೆ ಹಸ್ತಾಂತರಿಸದೇ, ಲೀಸ್ ಅವಧಿಯನ್ನು ಮುಂದುವರಿಸಿಕೊಂಡು ಬರುತ್ತಿದ್ದಾರೆ. ಇದರಿಂದಾಗಿ ಸರ್ಕಾರಕ್ಕೂ ಆಧಾಯವಿಲ್ಲ. ಆದ್ದರಿಂದ ಅಂತಹ ಜಮೀನುಗಳನ್ನು ಯಾವ ಗುತ್ತಿಗೆದಾರರು ಲೀಸ್ ಮೇಲೆ ಪಡೆದಿರುವರೋ ಅವರಿಗೆ ಸರ್ಕಾರದ ಮಾರುಕಟ್ಟೆ ಮೌಲ್ಯದ ಮೇಲೆ ನೀಡಲು ಚಿಂತನೆ ನಡೆಸಲಾಗುತ್ತಿದೆ ಎಂದು ಕಂದಾಯ ಸಚಿವ ಆರ್ ಅಶೋಕ್ ಅವರು ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ, ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸ್ವಾತಂತ್ರ್ಯಕ್ಕೂ ಮುನ್ನ ಬ್ರಿಟಿಷ್ ಆಳ್ವಿಕೆಯ ಅವಧಿಯಲ್ಲಿ ಲೀಸ್ ಆಧಾರದ ಮೇಲೆ ನೀಡಲಾಗಿದ್ದ ಜಮೀನನ ಅವಧಿ ಮುಗಿದರೂ ಇನ್ನೂ ಅಂತಹ ಜಮೀನುಗಳನ್ನು ಸರ್ಕಾರಕ್ಕೆ ಹಸ್ತಾಂತರ ಮಾಡಿರುವುದಿಲ್ಲ. ಆಗಿನ ಲೀಸ್ ಮೌಲ್ಯದ ಮೇಲೆಯೇ ಅವಧಿಯನ್ನು ಮುಂದುವರೆಸಿಕೊಂಡು ಬರುತ್ತಿದ್ದು, ಸರ್ಕಾರಕ್ಕೆ ಭೊಕ್ಕಸಕ್ಕೆ

ನಷ್ಟ ಉಂಟಾಗುತ್ತಿದೆ. ಇದನ್ನು ತಪ್ಪಿಸುವ ಸಲುವಾಗಿ ಯಾರು ಲೀಸ್ ಆಧಾರದ ಮೇಲೆ ಗುತ್ತಿಗೆ ಪಡೆದಿರುವರೋ ಅವರಿಗೆ ಸರ್ಕಾರದ ಇಂದಿನ ಮಾರುಕಟ್ಟೆಯ ಮೌಲ್ಯದ ಮೇಲೆ ನೀಡಿದಲ್ಲಿ ರಾಜಸ್ವ ಹೆಚ್ಚಾಗುವುದು. ಈ ನಿಟ್ಟಿನಲ್ಲಿ ಅಗತ್ಯ ಕ್ರಮವಹಿಸುತ್ತಿರುವುದಾಗಿ ತಿಳಿಸಿದರು.

ರಾಜ್ಯದ ಎಲ್ಲಾ ಜಿಲ್ಲೆಗಳ ಪೈಕಿ ಕೊಡಗು ಜಿಲ್ಲೆಯಲ್ಲಿ ಸ್ವಾತಂತ್ರ್ಯಕ್ಕೂ ಮುನ್ನ ಗುತ್ತಿಗೆ ಆಧಾರದಲ್ಲಿ ನೀಡಲಾಗಿದ್ದ ಜಮೀನಿನ ಗುತ್ತಿಗೆ ಅವಧಿ ಮುಕ್ತಾಯಗೊಂಡ ಜಮೀನುಗಳನ್ನು ಸರ್ಕಾರ ಈಗಾಗಲೇ ವಶಕ್ಕೆ ಪಡೆದಿರುತ್ತದೆ. ಆದರೆ ಕಲವು ಕಡೆ ಲೀಸ್ ಅವಧಿಯನ್ನು ಮುಂದುವರೆಸಿಕೊಂಡು ಬರಲಾಗುತ್ತಿದೆ.

ಬೆಳಗಾವಿ ಜಿಲ್ಲೆಯ ಗೋಕಾಕ ತಾಲ್ಲೂಕಿನ ಕೊಣ್ಣೂರ ಗ್ರಾಮದಲ್ಲಿ 672-08 ಎಕರೆ/ಗುಂಟೆ ಮತ್ತು ಗೋಕಾಕ ಗ್ರಾಮದಲ್ಲಿ 312-10 ಎಕರೆ/ ಗುಂಟೆ ಜಮೀನನ್ನು 90 ವರ್ಷಗಳ ಅವಧಿಗೆ ಗೋಕಾಕ್ ಫಾಲ್ಸ್ ಮಿಲ್ಸ್ ಇವರಿಗೆ ಗುತ್ತಿಗೆ ನೀಡಲಾಗಿತ್ತು. ಸದರಿ ಗುತ್ತಿಗೆ ಅವಧಿಯು 28-05-1983ರಂದು ಮುಕ್ತಾಯಗೊಂಡಿತ್ತು. ಸದರಿ ಗುತ್ತಿಗೆಯನ್ನು ಪುನಃ 50 ವರ್ಷಗಳ ಅವಧಿಗೆ ಮುಂದುವರೆಸಲಾಗಿದೆ. ಇದರಿಂದ ಸರ್ಕಾರಕ್ಕೆ ಯಾವುದೇ ರೀತಿಯ ಲಾಭವಿಲ್ಲ. ಆದ್ದರಿಂದ ಇಂತಹ ಜಮೀನುಗಳನ್ನು ಗುರುತಿಸಿ, ಲೀಸ್ ಆಧಾರದ ಮೇಲೆ ಗುತ್ತಿಗೆ ಪಡೆದವರಿಗೆ ಈಗಿನ ಸರ್ಕಾರದ ಮಾರುಕಟ್ಟೆ ಬೆಲೆಯಲ್ಲಿ ನೀಡಿದರೆ ಸರ್ಕಾರಕ್ಕೆ ಆದಾಯ ಬರುತ್ತದೆ. ಈ ಸಂಬಂಧ ಒಂದು ಹೊಸ ಕಾಯ್ದೆ ತರಲು ಚಿಂತಿಸಲಾಗುತ್ತಿದೆ ಎಂದು ಸಚಿವರು ಕಲಾಪದ ವೇಳೆ ತಿಳಿಸಿದರು.

## ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳ ರಸ್ತೆಗಳ ಅಭಿವೃದ್ಧಿ ಕ್ರಮ

**– ಸಚಿವ ಸಿ.ಸಿ. ಪಾಟೀಲ್**

ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ)

ರಾಜ್ಯದಲ್ಲಿರುವ ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳ ರಸ್ತೆಗಳ ಅಭಿವೃದ್ಧಿಗೆ ಅಗತ್ಯ ಕ್ರಮ ವಹಿಸಲಾಗುವುದು ಎಂದು ಮಾನ್ಯ ಲೋಕೋಪಯೋಗಿ ಸಚಿವ ಸಿ.ಸಿ ಪಾಟೀಲ್ ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ, ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕನಾಟಕ ರಾಜ್ಯದಲ್ಲಿ ಸುಮಾರು 7652.00 ಕಿ.ಮೀ. ರಷ್ಟು ಉದ್ದದ ಒಟ್ಟು 44 ರಾಷ್ಟ್ರೀಯ ಹೆದ್ದಾರಿಗಳಿವೆ. ಈ ಪೈಕಿ 3528.00 ಕಿಮೀ ನಷ್ಟು ಉದ್ದದ ಹೆದ್ದಾರಿಯು ಹೆದ್ದಾರಿಯು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಇವರ ಸುಪರ್ದಿಯಲ್ಲಿರುತ್ತದೆ. ಹಾಗೂ ಸುಮಾರು 4124.00 ಕಿಮೀ ನಷ್ಟು ಉದ್ದದ ಹೆದ್ದಾರಿಯು ರಾಷ್ಟ್ರೀಯ ಹೆದ್ದಾರಿ ವಲಯದ (ಲೋಕೋಪಯೋಗಿ ಇಲಾಖೆ ) ಸುಪರ್ದಿಯಲ್ಲಿರುತ್ತದೆ. ಎಲ್ಲಿ ರಸ್ತೆಗಳ ಅಭಿವೃದ್ಧಿಗೆ ಅವಶ್ಯಕತೆ ಇದೆಯೋ ಅಲ್ಲಿ ಅಗತ್ಯ ಕ್ರಮ ವಹಿಸಿ ಅಭಿವೃದ್ಧಿ ಪಡಿಸಲಾಗುವುದು. ಈ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲಾಗುವುದು ಎಂದು ತಿಳಿಸಿದರು.

ಕನಕಪುರ ರಾಷ್ಟ್ರೀಯ ಹೆದ್ದಾರಿಯ ರಸ್ತೆಯನ್ನು ಅಭಿವೃದ್ಧಿ ಪಡಿಸುವ ಸಂಬಂಧ ರಾಷ್ಟ್ರೀಯ ಹೆದ್ದಾರಿ ವಲಯದ ಅಧಿಕಾರಿಗಳೊಂದಿಗೆ ಶೀಘ್ರದಲ್ಲಿಯೇ ಚರ್ಚಿಸಿ ಅಗತ್ಯ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

# ಭೂ ಸಂತ್ರಸ್ಥರಿಗೆ ಕೂಡಲೇ ಪರಿಹಾರ ಒದಗಿಸಲು ಕ್ರಮ

**– ಸಚಿವ ಆರ್. ಅಶೋಕ್**

ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ)

ಹಾಸನ ಜಿಲ್ಲೆಯ ವ್ಯಾಪ್ತಿಯಲ್ಲಿ ಎತ್ತಿನಹೊಳೆ ನೀರಾವರಿ ಯೋಜನೆಗಾಗಿ ರೈತರ ಜಮೀನುಗಳನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದ್ದು, ಈಗಾಗಲೇ ಬಹುತೇಕ ಭೂ ಸಂತ್ರಸ್ತರಿಗೆ ಪರಿಹಾರವನ್ನು ಒದಗಿಸಲಾಗಿದೆ. ಬಾಕಿ ಉಳಿದಿರುವ ಭೂ ಸಂತ್ರಸ್ಥರಿಗೂ ಶೀಘ್ರದಲ್ಲಿಯೇ ಪರಿಹಾರ ಒದಗಿಸಲು ಅಗತ್ಯ ಕ್ರಮ ವಹಿಸುವುದಾಗಿ ಕಂದಾಯ ಸಚಿವ ಆರ್. ಅಶೋಕ್ ಅವರು ತಿಳಿಸಿದರು.

ಇಂದು ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ, ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಹಾಸನ ಜಿಲ್ಲೆಯಲ್ಲಿ ಎತ್ತಿನಹೊಳೆ ಕುಡಿಯುವ ನೀರು ಯೋಜನೆಗಾಗಿ 92 ಗ್ರಾಮಗಳಲ್ಲಿ ಒಟ್ಟು 2558.05 ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ. ಇಲ್ಲಿಯವರೆಗೆ 91 ಗ್ರಾಮಗಳಲ್ಲಿ 2381 ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಂಡಿದ್ದು, 01 ಗ್ರಾಮದಲ್ಲಿ 176.14 ಎಕರೆ ಜಮೀನು ಸ್ವಾಧೀನಪಡಿಸಿಕೊಳ್ಳುವುದು ಬಾಕಿ ಇದೆ.

ಸದರಿ ಯೋಜನೆಗೆ ಈಗಾಗಲೇ ಭೂಸ್ವಾಧೀನಪಡಿಸಿಕೊಂಡ ಜಮೀನನ ಪೈಕಿ 755.33 ಎಕರೆ ಜಮೀನಿಗೆ ಪರಿಹಾರ ನೀಡಲು ರೂ 211 ಕೋಟಿಗೂ ಹೆಚ್ಚು ಮೊತ್ತದ ಐತೀರ್ಪಿಗೆ ಅನುಮೋದನೆ ನೀಡಲಾಗಿದೆ. ಉಳಿದ 1625.37 ಎಕರೆ ಜಮೀನಿಗೆ ಕೋರಿಕೆ ಇಲಾಖೆಯಿಂದ ಅನುದಾನ ಬಿಡುಗಡೆಗೊಳಿಸಲು ಕ್ರಮವಹಿಸಲಾಗುತ್ತಿದ್ದು, ನಂತರ ಭೂ ಸಂತ್ರಸ್ಥರಿಗೆ ಪರಿಹಾರ ಪಾವತಿಸಲಾಗುವುದು ಎಂದು ತಿಳಿಸಿದರು.

ಭೂಸ್ವಾಧೀನಕ್ಕಾಗಿ ಕೋರಿಕೆ ಇಲಾಖೆಯಾದ ಜಲಸಂಪನ್ಮೂಲ ಇಲಾಖೆಯಿಂದ ಒಟ್ಟು ರೂ 19.15 ಕೋಟಿಗಳ ಅನುದಾನ ಬಿಡುಗಡೆಯಾಗಿದ್ದು, ರೂ. 63.00 ಕೋಟಿಗಳನ್ನು ಬಿಡುಗಡೆ ಮಾಡುವುದಾಗಿ ವಿಶ್ವೇಶ್ವರಯ್ಯ ಜಲನಿಗಮ ಇವರು ವಿಶೇಷ ಭೂಸ್ವಾಧೀನಾಧಿಕಾರಿ ಎತ್ತಿನಹೊಳೆ ಯೋಜನೆ ಇವರಿಗೆ ತಿಳಿಸಿದ್ದಾರೆ.

ಈ ಯೋಜನೆಯಲ್ಲಿ ಇಲ್ಲಿಯವರೆಗೂ ಒಟ್ಟು 150 ಭೂ ಮಾಲೀಕರುಗಳಿಗೆ ರೂ. 47.00 ಕೋಟಿಗೂ ಹೆಚ್ಚು ಪರಿಹಾರವನ್ನು ಪಾವತಿಸಲಾಗಿದೆ. ಒಬ್ಬ ಭೂ ಮಾಲೀಕನು ಪರಿಹಾರಕ್ಕೆ ಅರ್ಜಿ ಸಲ್ಲಿಸದೇ ಜಮೀನನ್ನು ಬಿಟ್ಟುಕೊಡದೇ ಇರುವುದರಿಂದ ರೂ. 40,96,832/– ಮೊತ್ತವನ್ನು ನ್ಯಾಯಾಲಯದಲ್ಲಿ ಠೇವಣಿ ಇಡಲಾಗಿದೆ ಎಂದು ತಿಳಿಸದರು.

ಈ ಯೋಜನೆಯಡಿ 629 ಭೂ ಮಾಲಿಕರಿಗೆ ಪರಿಹಾರ ಪಾವತಿಸಲು ಬಾಕಿ ಇದೆ. ಈ ಪೈಕಿ 10 ಗ್ರಾಮಗಳ 315 ಭೂ ಮಾಲಿಕರಿಗೆ ಪರಿಹಾರ ಪಡೆಯಲು ದಾಖಲೆ ನೀಡುವಂತೆ ಭೂ ಸ್ವಾಧೀನಾಧಿಕಾರಿಯವರು ನೋಟೀಸ್ ನೀಡಿರುತ್ತಾರೆ. ದಾಖಲೆಗಳು ಸಲ್ಲಿಸಿದ ನಂತರ ಪರಿಹಾರ ಪಾವತಿಸಲಾಗುವದು. ಉಳಿಕೆ 314 ಭೂಮಲೀಕರ ಪೈಕಿ ಕೆಲವು ಭೂ ಮಾಲಿಕರು ಜಮೀನಿನ ಹಕ್ಕು ಬಗ್ಗೆ ಸಿವಿಲ್ ನ್ಯಾಯಾಲಯದಲ್ಲಿ ಪ್ರಕರಣಗಳನ್ನು ದಾಖಲಿಸಿದ್ದು, ಕೆಲವು ಖಾತೆದಾರರು ಪೌತಿಯಾಗಿದ್ದು, ಖಾತೆ ಬದಲಾವಣೆಯಾಗಬೇಕಾಗಿರುತ್ತದೆ. ಕೆಲವು ಭೂ ಮಾಲಿಕರು ದಾಖಲಗಳನ್ನು ಹಾಜರುಪಡಿಸದೇ ಇರುವ ಕಾರಣಗಳಿಂದಾಗಿ ಪರಿಹಾರ ಪಾವರಿಸಿರುವುದಿಲ್ಲ. ದಾಖಲೆಗಳನ್ನು ಹಾಜರು ಪಡಿಸಿದ ಕೂಡಲೇ ಪರಿಹಾರವನ್ನು ಪಾವತಿಸಲಾಗುವುದು ಎಂದು ತಿಳಿಸಿದರು.

## ಚುನಾವಣಾ ಪ್ರಸ್ತಾವನೆ

ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ)

ವಿಧಾನ ಮಂಡಲದ / ವಿಧಾನ ಪರಿಷತ್ತಿನ ವಿವಿಧ ಸ್ಥಾಯಿ ಸಮಿತಿಗಳಿಗೆ ಚುನಾವಣೆ ನಡೆಸುವ ಬದಲು ಮಾನ್ಯ ಸದಸ್ಯರುಗಳನ್ನು ನಾಮನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಕೋಟಾ ಶ್ರೀನಿವಾಸ ಪೂಜಾರಿ, ಮಾನ್ಯ ಸಭಾನಾಯಕರು ಹಾಗೂ ಸಮಾಜ ಕಲ್ಯಾಣ ಸಚಿವರು ಸದನದಲ್ಲಿ ಪ್ರಸ್ತಾಪಿಸಿದರು. ಸದರಿ ಪ್ರಸ್ತಾವನೆಯನ್ನು ಸದನವು ಅಂಗೀಕರಿಸಿತು.

## ಸದನ ಸಮಿತಿಗಳ ಕಾಲಾವಕಾಶ ವಿಸ್ತರಿಸುವ ಪ್ರಸ್ತಾವನೆ

ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ)

ರಾಜ್ಯದಲ್ಲಿರುವ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಕ್ಲಬ್‌ಗಳ ಕಾರ್ಯವೈಖರಿ ಮತ್ತು ಚಟುವಟಿಕೆಗಳನ್ನು ಪರಿಶೀಲಿಸಲು ರಚಿಸಲಾಗಿರುವ ಸದನಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ಇನ್ನೂ 6 ತಿಂಗಳುಗಳ ಕಾಲಾವಕಾಶವನ್ನು ವಿಸ್ತರಿಸುವ ಬಗ್ಗೆ ಎನ್. ರವಿಕುಮಾರ್ (ಅಧ್ಯಕ್ಷರು, ವಿಶೇಷ ಸದನ ಸಮಿತಿ ಅವರು ವಿಧಾನಪರಿಷತಿನಲ್ಲಿಂದು ಪ್ರಸ್ತಾಪಿಸಿದರು. ಸದನವು ಸದರಿ ಪ್ರಸ್ತಾವನೆಯನ್ನು ಅಂಗೀಕರಿಸಿ ದಿನಾಂಕ: 21-09-2021ರಿಂದ ಮುಂದಿನ 6 ತಿಂಗಳುಗಳ ವರೆಗೆ ವಿಸ್ತರಣೆ ಮಾಡಿರುವುದಾಗಿ ತಿಳಿಸಿತು.

ರಾಜ್ಯದ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳನ್ನು ಪರಿಶೀಲಿಸಲು ರಚಿಸಲಾಗಿರುವ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ: 22-10-2021ರಿಂದ 6 ರಿಂಗಳ ಕಾಲಾವಕಾಶವನ್ನು ವಿಸ್ತರಿಸುವ ಬಗ್ಗೆ ಡಾ. ವೈ.ಎ. ನಾರಾಯಣಸ್ವಾಮಿ, ಅಧ್ಯಕ್ಷರು, ವಿಶೇಷ ಸದನ ಸಮಿತಿ ಅವರು ವಿಧಾನಪರಿಷತ್ತಿನಲ್ಲಿಂದು ಪ್ರಸ್ತಾಪಿಸಿದರು. ಸದನವು ಸದರಿ ಪ್ರಸ್ತಾವನೆಯನ್ನು ಅಂಗೀಕರಿಸಿ ದಿನಾಂಕ: 22-10-2021ರಿಂದ ಮುಂದಿನ 6 ತಿಂಗಳುಗಳ ವರೆಗೆ ವಿಸ್ತರಣೆ ಮಾಡಿರುವುದಾಗಿ ತಿಳಿಸಿತು.

## ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ, 2021

ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ):

ವಿಧಾನ ಸಭಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಲು ಹಾಗೂ ವಿಧೇಯಕವನ್ನು ಅಂಗೀಕರಿಸುವಂತೆ ಸೂಚಿಸಲು ಕಂದಾಯ ಸಚಿವ ಆರ್ ಅಶೋಕ್ ಅವರು ವಿಧಾನಪರಿಷತ್ತಿನಲ್ಲಿಂದು ಮಂಡಿಸಿದರು. ಸದವು ಸದರಿ ಪ್ರಸ್ತಾವನೆಯನ್ನು ಅಂಗೀಕರಿಸಿತು.

## ಆಹಾರ ಸ್ವಾವಲಂಬಿ ರಾಷ್ಟ್ರವಾಗಿದ್ದೇವೆ
## ಆಹಾರ ರಫ್ತು ದೇಶವಾಗುವುದು ಮತ್ತು ರೈತರ ಆದಾಯ ದ್ವಿಗುಣಗೊಳಿಸುವುದು ನಮ್ಮ ಗುರಿ
### ಕೇಂದ್ರ ಸಚಿವೆ: ಶೋಭ ಕರಂದ್ಲಾಜೆ

ಬೆಂಗಳೂರು, ಸೆಪ್ಟೆಂಬರ್ 22 (ಕರ್ನಾಟಕ ವಾರ್ತೆ):

ಭಾರತ 130 ಕೋಟಿಗೂ ಹೆಚ್ಚು ಜನಸಂಖ್ಯೆಯನ್ನು ಹೊಂದಿದ್ದರೂ ಸಹ ಆಹಾರ ಉತ್ಪಾದನೆಯಲ್ಲಿ ಸ್ವಾವಲಂಬಿ ರಾಷ್ಟ್ರವಾಗಿದ್ದು, ಭಾರತದ ಪ್ರಮುಖ ಹಾಗೂ ಅತಿ ಹೆಚ್ಚು ಜನರು ತೊಡಗಿಸಿಕೊಂಡಿರುವ ಕೃಷಿಯನ್ನು ಮತ್ತಷ್ಟು ಸದೃಢಗೊಳಿಸುವ ಉದ್ದೇಶದಿಂದ ರೈತರ ಆದಾಯ ದ್ವಿಗುಣಗೊಳಿಸುವ ಯೋಜನೆಗಳಿಗೆ ಕೇಂದ್ರ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಕೇಂದ್ರ ಕೃಷಿ ಹಾಗೂ ರೈತರ ಕಲ್ಯಾಣ ಇಲಾಖೆಯ ರಾಜ್ಯ ಸಚಿವೆ ಶೋಭ ಕರಂದ್ಲಾಜೆ ಅವರು ತಿಳಿಸಿದರು.

ಇಂದು ನಗರದ ಅಶೋಕ ಹೋಟೆಲ್‍ನಲ್ಲಿ ಎಪೆಡಾ ಸಂಸ್ಥೆಯ ಸಹ ಭಾಗಿತ್ವದಲ್ಲಿ ಹಮ್ಮಿಕೊಳ್ಳಲಾಗಿದ್ದ ಭಾರತ ಸ್ವಾತಂತ್ರ್ಯೋತ್ಸವದ ಅಂಗವಾಗಿ ರಫ್ತುದಾರರ ಸಮಾವೇಶ ಹಾಗೂ ವಸ್ತುಪ್ರದರ್ಶವನ್ನು ಉದ್ಘಾಟಿಸಿ ಮಾತನಾಡಿದ ಅವರು ಜಗತ್ತಿನ ಆಹಾರ ಉತ್ಪಾದನೆಯಲ್ಲಿ ಸ್ವಾವಲಂಬಿಗಳಾಗಿರುವ ಕೆಲವೇ ಕೆಲವು ರಾಷ್ಟ್ರಗಳಲ್ಲಿ ಒಂದಾಗಿರುವ ರಾಷ್ಟ್ರ ಭಾರತವಾಗಿದ್ದು, ಇಲ್ಲಿನ ರೈತರು ಬೆಳೆದ ಬೆಳೆಗಳಿಗೆ ಅಂತರರಾಷ್ಟ್ರೀಯ ಮಾರುಕಟ್ಟೆಯನ್ನು ಒದಗಿಸುವ ಉದ್ದೇಶದಿಂದ ಕೃಷಿ ಬೆಳೆಗಳ ಗುಣಮಟ್ಟ ಹೆಚ್ಚಿಸುವುದು ಹಾಗೂ ಸಂಸ್ಕರಣೆಯ ತಾಂತ್ರಿಕತೆಯನ್ನು ಸರಳೀಕರಣಗೊಳಿಸುವುದರ ಜೊತೆಯಲ್ಲಿ ಸ್ಥಳೀಯ ಮಟ್ಟದಲ್ಲಿ ಸ್ಥಳೀಯ ಬೆಳೆಗಳಿಗೆ ಅನುಗುಣವಾಗಿ ಕೃಷಿ ಕೈಗಾರಿಕೆಗಳನ್ನು ಸ್ಥಾಪಿಸುವುದು ನಮ್ಮ ಉದ್ದೇಶವಾಗಿದೆ ಎಂದು ತಿಳಿಸಿದರು.

ಪ್ರಸ್ತುತ ಸಾಲಿನಲ್ಲಿ ಕೇಂದ್ರ ಸರ್ಕಾರ ಕೃಷಿ ಸಂಬಂಧಿತ ಚಟುವಟಿಕೆಗಳನ್ನು ಪ್ರೋತ್ಸಾಹಿಸಲು ದೇಶದ ಒಟ್ಟು ಆಯವ್ಯಯದಲ್ಲಿ 1,31,000/- ಲಕ್ಷ ಕೋಟಿ ರೂ.ಗಳನ್ನು ನೀಡಿದ್ದು, ಇದು ಸ್ವಾತಂತ್ರ್ಯದ ನಂತರ ಕೃಷಿ ವಲಯಕ್ಕೆ ನೀಡಿರುವ ಅತ್ಯಂತ ಹೆಚ್ಚಿನ ಪ್ರೋತ್ಸಾಹವಾಗಿದೆ. ಈಗಾಗಲೇ ನಮ್ಮಲ್ಲಿ ಹೆಚ್ಚಾಗಿ ಬೆಳೆಯುತ್ತಿರುವ ಬೆಳೆಗಳಿಗೆ ಉತ್ತಮ ಮಾರುಕಟ್ಟೆಯನ್ನು ಒದಗಿಸಿದ್ದಲ್ಲಿ ಬೆಲೆ ಕುಸಿತದಂತಹ ಸಮಸ್ಯೆಗಳನ್ನು ಪರಿಹರಿಸಬಹುದಾಗಿದೆ.

ಅಂತರರಾಷ್ಟ್ರೀಯ ಮಾರುಕಟ್ಟೆಯ ಅವಶ್ಯಕತೆಗನುಗುಣವಾಗಿ ಉತ್ತಮ ಗುಣಮಟ್ಟ, ರಸಾಯನಿಕ ಮುಕ್ತ ಹಾಗೂ ಸಂಸ್ಕರಣಾ ಘಟಕಗಳ ಕಡೆ ನಾವು ಗಮನಹರಿಸಿದಲ್ಲಿ ನಮ್ಮ ರೈತರಿಗೆ ಉತ್ತಮ ಬೆಲೆ ದೊರಕುತ್ತದೆ ಹಾಗೂ ಇದರಿಂದ ಅವರ ಆದಾಯ ಸಹ ದ್ವಿಗುಣಗೊಳ್ಳುತ್ತದೆ. ಅದಕ್ಕಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಹಲವಾರು ಹೊಸ ಯೋಜನೆಗಳನ್ನು ಜಾರಿಗೆ ತಂದಿದ್ದು ಅವುಗಳ ಉಪಯೋಗವನ್ನು ರಫ್ತುದಾರರು, ರೈತರು ಮತ್ತು ಕೈಗಾರಿಕೋದ್ಯಮಿಗಳು ಬಳಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳು ವಿವಿಧತೆಯಿಂದ ಕೂಡಿದ್ದು, ಇಲ್ಲಿ ವಿಶ್ವವಿಖ್ಯಾತ ಮಸಾಲೆಗಳಿಂದಿಡಿದು ದ್ವಿದಳ ಧಾನ್ಯಗಳು, ತೋಟಗಾರಿಕೆ ಬೆಳೆಗಳು ಸೇರಿದಂತೆ ಬಯಲು ಸೀಮೆಯಲ್ಲಿ ಬೆಳೆಯುವ ಅನೇಕ ಬೆಳೆಗಳನ್ನು ನಾವು ರಫ್ತು ಮಾಡಬಹುದಾಗಿದೆ. ಅದಕ್ಕಾಗಿ ಜಿಲ್ಲೆಗೊಂದರಂತೆ ವಿಶೇಷ ಬೆಳೆಗಳನ್ನು ಗುರುತಿಸಿ ಅವುಗಳಿಗೆ ಸಂಬಂಧಿಸಿದ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳಲು ಈಗಗಾಲೇ ಯೋಜನೆ ಆರಂಭವಾಗಿದೆ.

ರಾಜ್ಯದಲ್ಲಿರುವ ಕೃಷಿ ವಿಶ್ವವಿದ್ಯಾನಿಲಯಗಳು ಸ್ಥಳೀಯ ರೈತರೊಂದಿಗೆ ಕೈಜೋಡಿಸುವ ಮೂಲಕ ಬೇಗ ಇಳುವರಿ ಕೊಡುವ ಹಾಗೂ ಉತ್ತಮ ಗುಣಮಟ್ಟದ ಬೆಳಗಳನ್ನು ಬೆಳೆಯಲು ಸಹಾಯಕವಾಗುವಂತೆ ಸಂಶೋಧನೆಯಲ್ಲಿ ತೊಡಗಿಕೊಳ್ಳಬೇಕು. ಇದಕ್ಕಾಗಿ ಅವಶ್ಯವಿರುವ ಅಂಶಗಳನ್ನು ನೀಡಿ ಸಹಕರಿಸಲು ಸರ್ಕಾರ ಸನ್ನದ್ದವಾಗಿದೆ ಎಂದು ತಿಳಿಸಿದರು.

ರೈತರು ತಮ್ಮ ಬೆಳೆಗಳನ್ನು ರಫ್ತು ಮಾಡಲು ವಿವಿಧ ದೇಶಗಳು ವಿವಿಧ ಮಾನದಂಡಗಳನ್ನು ಅನುಸರಿಸುತ್ತಿವೆ, ಅದರಲ್ಲಿ ಮುಖ್ಯವಾಗಿ ರಾಸಾಯನಿಕಗಳನ್ನು ಬಳಸದೇ ನೈಸರ್ಗಿಕವಾಗಿ ಬೆಳೆ ತೆಗೆಯುವ ವಿಧಾನಗಳಿಗೆ ಬದಲಾಗುವ ಮೂಲಕ ತಮ್ಮ ಬೆಳೆಗಳ ಬೆಲೆಯನ್ನು ಹೆಚ್ಚಿಸಿಕೊಳ್ಳಬಹುದಾಗಿದೆ.

ವಿಶ್ವಸಂಸ್ಥೆ 2023ನೇ ಸಾಲನ್ನು ಮಿಲ್ಲೆಟ್ಸ್ ವರ್ಷ ಎಂದು ಆಚರಿಸುತ್ತಿದೆ, ಇದಕ್ಕಾಗಿ ಭಾರತ ಸರ್ಕಾರ ಬೇಡಿಕೆಯನ್ನು ಸಲ್ಲಿಸಿತ್ತು, ಜಗತ್ತಿನಲ್ಲಿ ಅತೀ ಹೆಚ್ಚು ಮಿಲ್ಲೆಟ್ಸ್ ಬೆಳೆಯುವ ದೇಶ ನಮ್ಮದು. ನಾವು ಬೆಳೆದ ಬೆಳೆಗಳಿಗೆ ನಾವೇ ಮಾರುಕಟ್ಟೆಯನ್ನು ಹುಡುಕುವ ಬದಲಾಗಿ ವಿಶ್ವ ಮಾರುಕಟ್ಟೆ ನಮ್ಮ ಬೆಳೆಗಳನ್ನು ಬಯಸಿ ನಮ್ಮಲ್ಲಿಗೆ ಬರುವಂತೆ ಉತ್ತಮ ಗುಣಮಟ್ಟದ ಬೆಳೆಗಳನ್ನು ಬೆಳೆಯುವ ವಾತಾವರಣವನ್ನು ಸೃಷ್ಟಿಸೋಣ. ರಾಜ್ಯದ ಕೈಗಾರಿಕೆ ಇಲಾಖೆಯಲ್ಲಿರುವ ಕೃಷಿ ರಫ್ತು ವಿಭಾಗವನ್ನು ಪ್ರತ್ಯೇಕಗೊಳಿಸಿ ಕ್ಲಸ್ಟರ್ ರೂಪಿಸುವಂತೆ ಮುಖ್ಯಮಂತ್ರಿಗಳಿಗೆ ಬೇಡಿಕೆ ಸಲ್ಲಿಸಲಾಗಿದ್ದು, ಅವರು ಸಕರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಾದ ರಾಜಕುಮಾರ್ ಕತ್ರಿ, ಪ್ರಧಾನ ಕಾರ್ಯದರ್ಶಿಗಳಾದ ಡಾ.ರಾಜೇಂದ್ರಕುಮಾರ್ ಕಠಾರಿಯಾ, ನಬಾರ್ಡ್ ಬೆಂಗಳೂರು ಶಾಖೆಯ ಮುಖ್ಯಸ್ಥರಾದ ನೀರಜ್ ಕುಮಾರ್ ವರ್ಮ್, ಆಹಾರ ಸಂಸ್ಕರಣ ಸಂಸ್ಥೆಯ ನಿರ್ದೇಶಕರಾದ ಡಾ. ಆನಂದ ರಾಮಕೃಷ್ಣನ್, ರಫ್ತು ವಿಭಾಗದ ಜಂಟಿ ನಿರ್ದೇಶಕರಾದ ಹೆಚ್.ಡಿ.ಲೋಕೇಶ ಸೇರಿದಂತೆ ರೈತರು ಹಾಗೂ ಉದ್ಯಮಿಗಳು ಭಾಗವಹಿಸಿದ್ದರು.

## ವಿಧಾನ ಸಭೆಯಲ್ಲಿ ಲೆಕ್ಕಪರಿಶೋಧನಾ ವರದಿ ಮಂಡನೆ

ಬೆಂಗಳೂರು, ಸೆಪ್ಟೆಂಬರ್ 22 (ಕರ್ನಾಟಕ ವಾರ್ತೆ):

ಜಲಸಂಪನ್ಮೂಲ ಸಚಿವರಾದ ಗೋವಿಂದ ಎಂ ಕಾರಜೋಳ ಅವರು ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಅನುಪಾಲನಾ ಲೆಕ್ಕಪರಿಶೋಧನಾ ವರದಿಯನ್ನು ವಿಧಾನ ಸಭೆಯಲ್ಲಿ ಇಂದು ಮಂಡಿಸಿದರು.

## ಗ್ರಾಮೀಣಾಭಿವೃದ್ಧಿಗೆ ಮನರೇಗಾ ಯೋಜನೆ ಪೂರಕ

ಬೆಂಗಳೂರು, ಸೆಪ್ಟೆಂಬರ್ 22 (ಕರ್ನಾಟಕ ವಾರ್ತೆ):

ಮನರೇಗಾ ಯೋಜನೆಯಡಿ ರೈತರು ತಮ್ಮ ಬೆಳೆಗಳನ್ನು ಅಭಿವೃದ್ಧಿ ಪಡಿಸಿಕೊಳ್ಳಬಹುದಾಗಿದೆ. ಇದಲ್ಲದೇ ಶಾಲೆ, ಅಂಗನವಾಡಿ, ಆಟದ ಮೈದಾನ, ನೀರಿನ ಮರುಪೂರಣ ಕೆಲಸಗಳನ್ನು ಕೈಗೊಳ್ಳಬಹುದಾಗಿದೆ ಎಂದು ಭಾರತ ಸರ್ಕಾರದ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್‌ರಾಜ್ ಸಚಿವರಾದ ಗಿರಿರಾಜ್ ಸಿಂಗ್ ಅವರು ತಿಳಿಸಿದರು.

ಅವರು ಇಂದು ಮಾಗಡಿ ತಾಲ್ಲೂಕಿನ ಮೋಟಗೊಂಡನಹಳ್ಳಿಯಲ್ಲಿ ಕಲ್ಯಾಣಿ ಅಭಿವೃದ್ಧಿ ಕೆಲಸ, ಪೆಮ್ಮನಹಳ್ಳಿಯಲ್ಲಿ ಶಾಲಾ ಹಾಗೂ ಅಂಗನವಾಡಿ ಕಟ್ಟಡ ಅಭಿವೃದ್ಧಿ, ಸೋಲೂರಿನ ರೈತರ ಜಮೀನಿನಲ್ಲಿ ಶ್ರೀ ಗಂಧದ ಬೆಳೆ, ರಾಮನಗರ ತಾಲ್ಲೂಕಿನ ಹಾಗಲಹಳ್ಳಿಯಲ್ಲಿ ರೇಷ್ಮೆ ಬೆಳೆ ಹಾಗೂ ರೇಷ್ಮೆ ಚಟುವಟಿಕೆ, ಚನ್ನಪಟ್ಟಣ ತಾಲ್ಲೂಕಿನ ಮಾಕಳಿಯಲ್ಲಿ ಜಲನಯನ ಅಭಿವೃದ್ಧಿ ಕೆಲಸಗಳನ್ನು ವೀಕ್ಷಿಸಿದರು.

ಕೋಳಿ ಸಾಕಾಣಿಕೆ ಅಳವಡಿಸಿಕೊಂಡು ಹೆಚ್ಚು ಆದಾಯಗಳಿಸಿ : ಸೋಲೂರಿನಲ್ಲಿ ಶ್ರೀಗಂಧದ ಬೆಳೆ ವೀಕ್ಷಿಸಿದ ಕೇಂದ್ರ ಸಚಿವರು ರೈತರೊಂದಿಗೆ ಮಾತನಾಡಿ ಒಂದು ಎಕರೆ ಜಮೀನು ಇರುವ ರೈತರು ಸಹ ಹೆಚ್ಚಿನ ಆದಾಯಗಳಿಸಿ ಜೀವನ ನಡೆಸುವಂತಾಗಬೇಕು. ೧೦ ಚದರ ಅಡಿಯಲ್ಲಿ ಒಂದು ಕೋಳಿ ಸಾಕಾಣಿಕೆ ಮಾಡಬಹುದು. ಕೋಳಿ ಮಾರಾಟದಿಂದ ರೈತನಿಗೆ ಆದಾಯವಾದರೆ ಸಾಕಾಣಿಕೆಯಿಂದ ಬೆಳೆಗಳಿಗೆ ಗೊಬ್ಬರ ದೊರೆಯುತ್ತದೆ ಎಂದರು.

ಶ್ರೀಗಂಧದ ಗಿಡಗಳ ನಡುವೆ ಇರುವ ಸ್ಥಳಗಳಲ್ಲಿ ರೈತರು ಅರಿಶಿಣ, ಶುಂಠಿ ಮುಂತಾದ ಬೆಳೆಗಳನ್ನು ಬೆಳೆಯುವುದರಿಂದ ಹೆಚ್ಚಿನ ಆದಾಯ ದೊರೆಯುತ್ತದೆ. ಮನರೇಗಾ ವ್ಯಾಪ್ತಿಗೆ ಶ್ರೀಗಂಧದ ಬೆಳೆಯನ್ನು ತಂದಿರುವುದರಿAದ ಮುಂದಿನ ದಿನಗಳಲ್ಲಿ ಗಂಧದ ಉತ್ಪನ್ನಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಉತ್ಪಾದಿಸಬಹುದು ಎಂದರು.

ರಾಮನಗರ ತಾಲ್ಲೂಕಿನ ಸುಗ್ಗನಹಳ್ಳಿಯ ಗ್ರಾಮ ಪಂಚಾಯತಿಯ ಹಾಗಲಹಳ್ಳಿಯಲ್ಲಿ ಶಿವರಾಮಯ್ಯ ಅವರ ತೋಟಕ್ಕೆ ಭೇಟಿ ನೀಡಿ ಒಂದು ಎಕರೆ ರೇಷ್ಮೆ ಬೆಳೆಯಲ್ಲಿ ರೈತರು ಎಷ್ಟು ಅದಾಯ ಗಳಿಸಬಹುದು ಎಂದು ಮಾಹಿತಿ ಪಡೆದರು. ರೇಷ್ಮೆ ಇಲಾಖೆಯ ಉಪ ನಿರ್ದೇಶಕ ಪುಟ್ಟಸ್ವಾಮಿ ಅವರು ೨೦೨೧-೨೨ ನೇ ಸಾಲಿನಲ್ಲಿ ಮನರೇಗಾ ಯೋಜನೆಯಡಿ ೨೦೭೦ ಕಾಮಗಾರಿಗಳನ್ನು ಕೈಗೊಂಡು ೧೭೨೧ ಎಕರೆ ಹಿಪ್ಪುನೇರಳೆ ಬೆಳೆಯನ್ನು ವಿಸ್ತರಿಸಲಾಗಿದೆ. ೩೨೦೫೭೦ ಮಾನವ ದಿನ ಸೃಷ್ಟಿಸಿ ೯ ಕೋಟಿ ಖರ್ಚು ಮಾಡಲಾಗಿದೆ ಎಂದ ಅವರು ವಿವಿಧ ರೀತಿಯ ರೇಷ್ಮೆ ಹುಳು, ರೇಷ್ಮೆ ಸಾಕಾಣಿಕೆ, ರೇಷ್ಮೆ ಬೆಳೆ, ರೇಷ್ಮೆ ಉತ್ಪಾದನೆ ಕುರಿತು ಸಚಿವರಿಗೆ ವಿವರಿಸಿದರು.

ಕಾರ್ಯಕ್ರಮದಲ್ಲಿ ಲೋಕಸಭಾ ಸಂಸದರಾದ ಡಿ.ಕೆ ಸುರೇಶ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಪ್ರಧಾನ ಕಾರ್ಯದರ್ಶಿ ಅತೀಕ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಇಕ್ರಂ ಸೇರಿದಂತೆ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಪದವಿ ವಿದ್ಯಾರ್ಥಿಗಳ ಸ್ಕಾಲರ್‌ಶಿಪ್‌ಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 22 (ಕರ್ನಾಟಕ ವಾರ್ತೆ):

ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ (M.H.R.D), ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ಇವರ ವತಿಯಿಂದ 2021ರಲ್ಲಿ ನಡೆದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸಂಯೋಜನೆವಾರು Top 20th Percentile or 80th Percentile ಗಿಂತ ಹೆಚ್ಚು ಅಂಕಗಳಿಸಿದ ಹಾಗೂ ತಮ್ಮ ವಿದ್ಯಾಭ್ಯಾಸವನ್ನು ಕಡ್ಡಾಯವಾಗಿ ಉನ್ನತ ಶಿಕ್ಷಣದಲ್ಲಿ ಮುಂದುವರಿಸಿರುವಂತಹ (ಕನಿಷ್ಠ 03 ವರ್ಷದ ಪದವಿ ತರಗತಿಗೆ ದಾಖಲಾಗಿರುವ) ವಿದ್ಯಾರ್ಥಿಗಳಿಂದ Central Sector Scheme of Scholarship for College and University Students ಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ಕೇಂದ್ರ ಸರ್ಕಾರದ ವತಿಯಿಂದ ವೆಬ್‌ಸೈಟ್ ವಿಳಾಸ: www.scholarships.gov.in ನ National e-Scholarship Portal ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿದ್ದು, ಆ ಪೋರ್ಟಲ್‌ನಲ್ಲಿಯೇ 2021 ರ ಹೊಸ ಬ್ಯಾಚ್‌ನ ವಿದ್ಯಾರ್ಥಿಗಳು ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲು ವೆಬ್‌ಸೈಟ್ ವಿಳಾಸ: (Link for submission of application website:www.scholarship.gov.in =» New User(Register). ಪ್ರಸ್ತುತ ಪೋರ್ಟಲ್‌ನಲ್ಲಿ ಹೊಸ ಬ್ಯಾಚ್‌ನ ಕಾರ್ಯ ಜಾರಿಯಲ್ಲಿದ್ದು, ಶೀಘ್ರದಲ್ಲಿಯೇ ಪೂರ್ಣಗೊಳ್ಳಲಿದೆ.

ಆಸಕ್ತ ವಿದ್ಯಾರ್ಥಿಗಳು ಆಗಾಗ ಕೇಂದ್ರ ಸರ್ಕಾರದ ವತಿಯಿಂದ ನಿಗದಿಪಡಿಸುವ ದಿನಾಂಕದೊಳಗಾಗಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

2021ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ (ಹೊಸ ಹಾಗೂ ನವೀಕರಣಗಳಿಗೆ) ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಆಧಾರ್ ನೋಂದಣಿ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಬೇಕಿರುತ್ತದೆ. ಆದಕಾರಣ, ಆಸಕ್ತ ವಿದ್ಯಾರ್ಥಿಗಳು ಆಧಾರ್ ನೋಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ ಹೊಂದಿರಬೇಕು.

ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸಿದ ಎಲ್ಲಾ ದಾಖಲೆಗಳನ್ನು (ಮೂಲ ದಾಖಲೆಗಳ ಜೊತೆಯಲ್ಲಿ) ಪರಿಶೀಲನೆಗಾಗಿ ತಾವು ಅಧ್ಯಯನ ಮಾಡುತ್ತಿರುವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಕೇಂದ್ರ ಸರ್ಕಾರದಿಂದ ನಿಗದಿಪಡಿಸಿರುವ ದಿನಾಂಕದೊಳಗಾಗಿ ಸಲ್ಲಿಸುವುದು.

ಪ್ರಾಚಾರ್ಯರು, ವಿದ್ಯಾರ್ಥಿ ವೇತನದ ಉದ್ದೇಶಕ್ಕಾಗಿ ಖಾತೆ ತೆರೆದಿರುವ ಬ್ಯಾಂಕ್‌ನ ವಿವರಗಳನ್ನು ಪರಿಶೀಲಿಸಿ ಖಚಿತ ಪಡಿಸಿಕೊಂಡು, ಮಾಹಿತಿಯನ್ನು ಆನ್‌ಲೈನ್ ಮೂಲಕವೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿಪಡಿಸಿರುವ ದಿನಾಂಕ: 30/11/2021 ರೊಳಗೆ ಇಲಾಖೆಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗೆ ಕೇಂದ್ರ ಕಛೇರಿಯ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನದ ಶಾಖೆಯನ್ನು ಸಂಪರ್ಕಿಸಬಹುದು. ಪ್ರಸ್ತುತ National e-Scholarship Portal ನಲ್ಲಿ ವಿದ್ಯಾರ್ಥಿ ವೇತನದ ನಿಮಿತ್ತ ಕಾರ್ಯ ನಡೆಯುತ್ತಿರುವ ಕಾರಣ ಹೆಚ್ಚಿನ ಮಾಹಿತಿಯು ಲಭ್ಯವಿರುವುದಿಲ್ಲ. ಪ್ರಕ್ರಿಯೆ ಚಾಲನೆಗೊಂಡ ಕೂಡಲೇ ವಿದ್ಯಾರ್ಥಿ ವೇತನದ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾದಲ್ಲಿ ಇಲಾಖಾ ಅಂತರ್ಜಾಲದಲ್ಲಿ ಅಳವಡಿಸಲಾಗುವುದು.

ಪದವಿ ಪೂರ್ವ ಶಿಕ್ಷಣ ಇಲಾಖೆಯ **ವೆಬ್‌ಸೈಟ್ ವಿಳಾಸ:** http://pue.kar.nic.in =» Scholarship =» MHRD Scholarship =» MHRD Scholarship 2021– ಹೊಸ ಬ್ಯಾಚ್ ನಿಂದ ಮಾಹಿತಿಯನ್ನು ಪಡೆದುಕೊಳ್ಳಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ನಾಳೆ ನೀರಿನ ಅದಾಲತ್

ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ):

ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ಸೆಪ್ಟೆಂಬರ್ 23 ಗುರುವಾರ ದಂದು **(ದಕ್ಷಿಣ ವಿಲೇಜ್)–2, (ಆಗ್ನೇಯ–5), (ಪಶ್ಚಿಮ ವಿಲೇಜ್)–1, (ನೈರುತ್ಯ)–4, (ಪೂರ್ವ ವಿಲೇಜ್–3), (ಪೂರ್ವ ವಿಲೇಜ್–1), (ವಾಯುವ್ಯ–5), (ಈಶಾನ್ಯ–3) ಮತ್ತು (ಉತ್ತರ–1)** ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ನೀರಿನ ಅದಾಲತ್‌ಅನ್ನು ಬೆಳಿಗ್ಗೆ 9.30 ರಿಂದ 11:00 ಗಂಟೆಯವರೆಗೆ ಆಯೋಜಿಸಲಾಗಿದೆ.

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಳಿಯ ಸಹಾಯವಾಣಿ 1916 ಹಾಗೂ ವಾಟ್ಸ್‌ಆಪ್ ಸಂಖ್ಯೆ: 8762228888 ಗೆ ಸಂಪರ್ಕಿಸಬಹುದಾಗಿದೆ. ಸಾರ್ವಜನಿಕರು ಮೇಲಿನ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಈ ಅದಾಲತ್ ಸೌಲಭ್ಯವನ್ನು ಬಳಸಿಕೊಳ್ಳಬಹುದಾಗಿದೆ ಹಾಗೂ ಕೋವಿಡ್–19 ನ ಮರುತೆರವು ಮಾರ್ಗಸೂಚಿಯನ್ವಯ ಸಭೆಗೆ ಹಾಜರಾಗಲಿರುವ ಸಂದರ್ಭದಲ್ಲಿ ಎಲ್ಲಾ ಸುರಕ್ಷತೆಯನ್ನು ಕಾಪಾಡಿಕೊಳ್ಳಬೇಕು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## Regarding water adalath held in various sub divisions

Bengaluru, September 22, (Karnataka Information):

BWSSB water Adalath is being held on 23.09.2021 in **(South Village-2), (South East-5), (West Village-1), (South West-4), (East Village-3), (East Village-1), (North West-5), (North East-3), and (North-1)** sub divisions from 9:30.am to

11.00 am to settle the grievances concerned with the water billing, delay in providing water supply & sanitary connections, delay in converting from domestic connection to non domestic connection & other related issues. The details of the places where the Adalath will be held is as follows.

For any problems regarding the water supply and all, publics can contact helpline number: 1916 & whats app no: 8762228888. Public can utilize this adalath facilities to solve the problems regarding water supply. Public are requested to follow all precautionary measures according to **Covid-19 Re-open** guidelines while attending the adalath.

## ಅಕ್ಟೋಬರ್ 21 ರಿಂದ ಕರ್ನಾಟಕ ಮುಕ್ತ ಶಾಲೆ ಪೂರಕ ಪರೀಕ್ಷೆ

ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ):

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ಕರ್ನಾಟಕ ಮುಕ್ತ ಶಾಲೆ (ಕೆ.ಓ.ಎಸ್) ಪೂರಕ ಪರೀಕ್ಷೆ ಅಕ್ಟೋಬರ್ –2021 ರ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದ್ದು, ಅಕ್ಟೋಬರ್ 21 ರಿಂದ ಅಕ್ಟೋಬರ್ 30 ರವರೆಗೆ ಕೆ.ಓ.ಎಸ್. ಪೂರಕ ಪರೀಕ್ಷೆಗಳನ್ನು ನಿಗಧಿತ ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಡಿಪ್ಲೋಮಾ ಪ್ರವೇಶ ಪ್ರಕ್ರಿಯೆ ದಿನಾಂಕ ವಿಸ್ತರಣೆ

ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ):

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯು ಸರ್ಕಾರಿ ಜವಳಿ ತಾಂತ್ರಿಕ ಸಂಸ್ಥೆಯಲ್ಲಿ ಪ್ರಥಮ ಸೆಮಿಸ್ಟರ್ ಟೆಕ್ಸ್‌ಟೈಲ್ ಟೆಕ್ನಾಲಜಿ ಡಿಪ್ಲೋಮಾ ಕೋರ್ಸಿಗೆ ಸೆಪ್ಟೆಂಬರ್ 30 ರವರೆಗೆ ಪ್ರವೇಶ ಪ್ರಕ್ರಿಯೆಯನ್ನು ವಿಸ್ತರಿಸಲಾಗಿದೆ.

ಆಸಕ್ತ ಅರ್ಹ ಅಭ್ಯರ್ಥಿಗಳು ಎಸ್.ಎಲ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಶೇಕಡ 35% ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಅಥವಾ ಐ.ಟಿ.ಐ / ಪಿ.ಯು.ಸಿಯಲ್ಲಿ ಉತ್ತೀರ್ಣ / ಅನುತ್ತೀರ್ಣವಾಗಿರಬಹುದು. ವಿದ್ಯಾರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ನೇರವಾಗಿ ಕಾಲೇಜಿಗೆ ಬಂದು ಪ್ರವೇಶ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9481101049, 9448705205, 080–22267580 ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಪ್ರಾಣಿಗಳ ದತ್ತು ಸ್ವೀಕಾರ

ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ):

ಮೈಸೂರು ಮೃಗಾಲಯದ ಪ್ರಾಣಿಗಳ ದತ್ತು ಸ್ವೀಕಾರ ಯೋಜನೆ ಅಡಿಯಲ್ಲಿ “ನಾಗರಹಾವು” ಅನ್ನು ಮಂಡ್ಯದ ಎ.ಜಿ.ಅನನ್ಯ, “ಬಿಳಿ ನವಿಲು” ಅನ್ನು ಮೈಸೂರಿನ ಸಂಗೀತ.ಎಸ್, “ಪ್ಲ್ಯಾಮಿಂಗೊ” ಅನ್ನು ಮೈಸೂರಿನ ವೈನವಿ ವಿನಯ್, “ಚಿಂಪಾಂಜಿ, ಇಂಡಿಯನ್ ಘೇಂಡಾಮೃಗ, ಸೌತ್ ವೈಟ್ ಘೇಂಡಾಮೃಗ, ಹಿಪಪುಟಮಸ್” ಅನ್ನು ಮೈಸೂರಿನ ರಘುಲಾಲ್ ರಾಘವನ್ ಅವರು ಮೈಸೂರು ಮೃಗಾಲಯದ ಪ್ರಾಣಿ ಪಕ್ಷಿಗಳನ್ನು ನಿಗಧಿಪಡಿಸಿರುವ ಶುಲ್ಕವನ್ನು ಪಾವತಿಸಿ, ದತ್ತು ಸ್ವೀಕಾರ ಮಾಡಿರುವುದಕ್ಕೆ ಮೈಸೂರು ಮೃಗಾಲಯವು ಅಭಿನಂದನೆಗಳನ್ನು ಸಲ್ಲಿಸಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಚಿವಾಲಯ ಗ್ರಂಥಾಲಯದಲ್ಲಿ  ಅಪ್ರೆಂಟಿಸ್ ಟ್ರೈನಿಗಳಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ):

ರಾಜ್ಯ ಸರ್ಕಾರ ಸಚಿವಾಲಯ ಗ್ರಂಥಾಲಯದಲ್ಲಿ 2021-22ರ ಸಾಲಿಗೆ ಒಂದು ವರ್ಷದ ಅವಧಿಗೆ ಅಪ್ರೆಂಟಿಸ್ ಟ್ರೈನಿಗಳನ್ನು ನೇಮಕ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಗ್ರಾಜುಯೇಟ್ ಅಪ್ರೆಂಟಿಸ್ (ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ) 04 ಹುದ್ದೆಗಳಿಗೆ ಲೈಬ್ರರಿ ಸೈನ್ಸ್‌ನಲ್ಲಿ ಪದವಿ (ಬಿ.ಎಲ್.ಐ.ಎಸ್.ಸಿ) ಅಭ್ಯರ್ಥಿಗಳಿಗೆ  ಮಾಹೆಯಾನ ರೂ.10,000/-, ಸ್ಟೈಫಂಡ್ ನೀಡಲಾಗುವುದು. ಟೆಕ್ನೀಷಿಯನ್ ಅಪ್ರೆಂಟಿಸ್ (ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ) 06 ಹುದ್ದೆಗಳಿಗೆ ಲೈಬ್ರರಿ ಸೈನ್ಸ್‌ನಲ್ಲಿ ಡಿಪ್ಲೋಮಾ ಅಭ್ಯರ್ಥಿಗಳಿಗೆ ಮಾಹೆಯಾನ ರೂ.8,000/-, ಟೆಕ್ನೀಷಿಯನ್ ಅಪ್ರೆಂಟಿಸ್ (ಕಮರ್ಷಿಯಲ್ ಪ್ರಾಕ್ಟೀಸ್) 01 ಹುದ್ದೆಗೆ ಕಮರ್ಷಿಯಲ್ ಪ್ರಾಕ್ಟೀಸ್‌ನಲ್ಲಿ ಡಿಪ್ಲೋಮಾ ಅಭ್ಯರ್ಥಿಗಳಿಗೆ  ಮಾಹೆಯಾನ ರೂ.8,000/-, ಸ್ಟೈಫಂಡ್ ನಿಗಧಿಪಡಿಸಲಾಗಿರುತ್ತದೆ.

ನಿಗಧಿತ ಶಿಕ್ಷಣಾರ್ಹತೆಯನ್ನು 2019 ಮೇ ತಿಂಗಳ ನಂತರ ಪಡೆದವರು ಮಾತ್ರ ಈ ತರಬೆತಿಗೆ ಅರ್ಹರಾಗಿರುತ್ತಾರೆ. ತರಬೇತಿಗೆ ಅಭ್ಯರ್ಥಿಗಳನ್ನು ಮೆರಿಟ್ ಹಾಗೂ ಮೀಸಲಾತಿಯ ಆಧಾರದ ಮೇಲೆ ನಿಯಮಾನುಸಾರ ಆಯ್ಕೆ ಮಾಡಲಾಗುವುದು. ಈಗಾಗಲೇ ಅಪ್ರೆಂಟಿಸ್ ತರಬೇತಿ ಪಡೆದವರಾಗಿದ್ದರೆ ಅಂತಹವರು ಅರ್ಜಿಗಳನ್ನು ಸಲ್ಲಿಸುವಂತಿಲ್ಲ. ಮುಕ್ತ ವಿಶ್ವವಿದ್ಯಾನಿಲಯ/ ದೂರ ಶಿಕ್ಷಣದ ಮೂಲಕ ಪದವಿಗಳನ್ನು ಪಡೆದ ಅಭ್ಯರ್ಥಿಗಳನ್ನು ತರಬೇತಿಗೆ ಪರಿಗಣಿಸುವುದಿಲ್ಲ.

ಅಭ್ಯರ್ಥಿಗಳು ನಿಗಧಿತ ನಮೂನೆಯಲ್ಲಿ ಅರ್ಜಿಯನ್ನು ಮುಖ್ಯ ಗ್ರಂಥಾಧಿಕಾರಿ, ಸಚಿವಾಲಯ ಗ್ರಂಥಾಲಯ, ಕೊಠಡಿ ಸಂಖ್ಯೆ: 11, ನೆಲಮಹಡಿ, ವಿಧಾನಸೌಧ, ಬೆಂಗಳೂರು-560001 ಇವರಿಗೆ ಅಕ್ಟೋಬರ್ 25, 2021 ರೊಳಗೆ ಸಲ್ಲಿಸಬೇಕು. ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 080-22033462/3011 ಅಥವಾ ಇ-ಮೇಲ್ ವಿಳಾಸ: ksecretariatlibrary@gmail.com ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಲ್ಲಿ ತೆರವಾಗಿರುವ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ

ಬೆಂಗಳೂರು, ಸೆಪ್ಟೆಂಬರ್ 22 (ಕರ್ನಾಟಕ ವಾರ್ತೆ):

ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಲ್ಲಿ ತೆರವಾಗಿರುವ ಅಧ್ಯಕ್ಷರ ಸ್ಥಾನಕ್ಕೆ ಚುನಾವಣೆ ಪ್ರಕ್ರಿಯೆ ಕೈಗೊಳ್ಳಲು ಸೆಪ್ಟೆಂಬರ್ 27 ರಂದು ದಿನಾಂಕವನ್ನು ನಿಗಧಿಪಡಿಸಲಾಗಿದೆ.

ದಿನಾಂಕ: 27-09-2021 ರಂದು ಮಧ್ಯಾಹ್ನ 12.00 ಗಂಟೆಗೆ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಮುಖ್ಯ ಕಛೇರಿ, ಕನ್ನಿಂಗ್ ಹ್ಯಾಮ್ ರಸ್ತೆ, ಬೆಂಗಳೂರು ಇಲ್ಲಿ ಅಧ್ಯಕ್ಷ ಸ್ಥಾನಕ್ಕೆ ಚುನಾವಣಾ ಸಭೆಯನ್ನು ಏರ್ಪಡಿಸಲಾಗಿದೆ.

ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಇವರನ್ನು ನಾಮಪತ್ರಗಳನ್ನು ಸ್ವೀಕರಿಸಲು ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಚುನಾವಣಾಧಿಕಾರಿಗಳು ಅಧಿಕೃತಗೊಳಿಸಿರುತ್ತಾರೆ.

ನಾಮಪತ್ರಗಳನ್ನು ಸ್ವೀಕರಿಸಲು ಸೆಪ್ಟೆಂಬರ್ 27, ಮುಂಜಾನೆ 10.00 ಗಂಟೆಯಿಂದ 11.00 ಗಂಟೆಯವರೆಗೆ ನಿಗಧಿಗೊಳಿಸಿದ್ದು, ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಮುಖ್ಯ ಕಛೇರಿ, ಕನ್ನಿಂಗ್ ಹ್ಯಾಮ್ ರಸ್ತೆ, ಬೆಂಗಳೂರು ಇಲ್ಲಿ ನಾಮಪತ್ರಗಳನ್ನು ಸಲ್ಲಿಸಬಹುದಾಗಿದೆ.

ಚುನಾವಣಾ ಸಭೆಯಲ್ಲಿ ಎಲ್ಲಾ ಸದಸ್ಯರ ಹಾಜರಾತಿ ಕಡ್ಡಾಯವಾಗಿದ್ದು, ನಾಮಪತ್ರಗಳ ಪರಿಶೀಲನೆ, ನಾಮಪತ್ರಗಳನ್ನು ವಾಪಸ್ ಪಡೆಯುವುದು, ಚುನಾವಣೆ (ಅಗತ್ಯವಿದ್ದಲ್ಲಿ), ಮತಗಳ ಎಣಿಕೆ (ಅಗತ್ಯವಿದ್ದಲ್ಲಿ), ನಂತರ ಚುನಾವಣಾ ಫಲಿತಾಂಶ ಘೋಷಣೆ ಪ್ರಕ್ರಿಯೆಗಳು ನಡೆಯಲಿವೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸ್ನಾತಕ ಪದವಿಗಳಿಗೆ ಕೃಷಿಕರ ಕೋಟಾದಡಿಯಲ್ಲಿ ಪ್ರವೇಶಕ್ಕೆ ದಾಖಲಾತಿಗಳ ಪರಿಶೀಲನೆ

ಬೆಂಗಳೂರು, ಸೆಪ್ಟೆಂಬರ್ 22 (ಕರ್ನಾಟಕ ವಾರ್ತೆ):

ಕೃಷಿ ವಿಶ್ವವಿದ್ಯಾಲಯವು 2021–22ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಗಳಿಗೆ ಕೃಷಿಕರ ಕೋಟಾದಡಿಯಲ್ಲಿ (50%) ಪ್ರವೇಶಾತಿ ಸಂಬಂಧ ಅಭ್ಯರ್ಥಿಗಳು ಸಲ್ಲಿಸುವ ದಾಖಲಾತಿಗಳನ್ನು ಆನ್‌ಲೈನ್ ಪರಿಶೀಲನೆ ಕೈಗೊಳ್ಳಲಾಗುವುದು.

ಅಭ್ಯರ್ಥಿಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಅರ್ಜಿಯನ್ನು ಸಲ್ಲಿಸುವಾಗ ಯಾವ ಕೇಂದ್ರದಲ್ಲಿ ದಾಖಲಾತಿ ಪರಿಶೀಲನೆಗೆ ಆಯ್ಕೆ ಮಾಡಲಾಗಿರುತ್ತದೆಯೋ ಅದೇ ಕೇಂದ್ರಗಳಲ್ಲಿ ಸಂಬಂಧಿತ ವಿಶ್ವವಿದ್ಯಾನಿಲಯಗಳಿಂದ ನಿಯೋಜಿಸಿದ ಸಮಿತಿ ದಾಖಲಾತಿಗಳನ್ನು ಸೆಪ್ಟೆಂಬರ್ 22, 2021 (ಮಧ್ಯಾಹ್ನ 2.00 ಗಂಟೆಯ ನಂತರ) ರಿಂದ ಸೆಪ್ಟೆಂಬರ್ 28, 2021 ರ (ಮಧ್ಯರಾತ್ರಿ 12.00 ಗಂಟೆ) ವರೆಗೆ ಪರಿಶೀಲನೆ ಮಾಡಲಾಗುವುದು.

ಅಭ್ಯರ್ಥಿಗಳು ಅನ್‌ಲೈನ್ ಪರಿಶೀಲನೆಗೆ ಸಲ್ಲಿಸಬೇಕಾದ ರೂ.200/– ಸಾಮಾನ್ಯ ಮತ್ತು ಇತರೆ ರೂ. 100/– ಪ.ಜಾ/ಪ.ಪ/ ಪ್ರವರ್ಗ–1 ಶುಲ್ಕವನ್ನು ಕೃಷಿ ವಿಶ್ವವಿದ್ಯಾನಿಲಯಗಳ ಅಧಿಕೃತ ಜಾಲತಾಣದಲ್ಲಿ ನೀಡಿರುವ ಆನ್‌ಲೈನ್ ಸೌಲಭ್ಯ ಮೂಲಕ ತುಂಬಬಹುದಾಗಿದೆ. ಶುಲ್ಕ ತುಂಬಿದ ನಂತರವೇ ಶುಲ್ಕ ರಸೀತಿ ಹಾಗೂ ದಾಖಲಾತಿಗಳನ್ನು ಸಲ್ಲಿಸಿದ ಮಾಹಿತಿಯನ್ನು ಅಭ್ಯರ್ಥಿಗಳು ಡೌನ್‌ಲೋಡ್ ಮಾಡಿಕೊಳ್ಳಲು ಸಾಧ್ಯ.

ಹೆಚ್ಚಿನ ಮಾಹಿತಿಗಾಗಿ ಮತ್ತು ದಾಖಲಾತಿಗಳ ಅಪ್‌ಲೋಡ್‌ಗೆ ಅಧಿಕೃತ ವಿಳಾಸ: 1.www.uasbanglore.edu.in 2.www.uasd.edu.in 3.www.uhsbagalkot.edu.in 4.www.uahs.in 5.www.uasraichur.edu.in 6.www.kvafsu.edu.in 7.kea.kar.nic.in ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## Azadi Ka Amrit Mahotsav : Commemorate 75 years of independence of progressive India

Bengaluru, September 22, (Karnataka Information):

Azadi Ka Amrit Mahotsav' is an initiative of the Government of India to celebrate and commemorate 75 years of independence of progressive India and the glorious history of its people, culture and achievements.

The Prime Minister, Shri Narendra Modi inaugurated the ‘Azadi Ka Amrit Mahotsav' by flagging off ‘Dandi March' from Sabarmati Ashram, Ahmedabad on 12th March 2021. This

Mahotsav will continue till 15 August 2023. The aim of celebrating Azadi ka Amrit Mahotsav is to create a Vision for India in 2047.

APEDA, a Statutory Body under the Ministry of Commerce & Industry, Government of India, is the nodal agency for promoting Indian agro and processed food exports and is responsible for facilitating and promoting export of horticulture, floriculture, processed food, poultry products, dairy and other agro products.

APEDA has taken number of export promotion activities and initiatives, by way of development of virtual portals for organizing Virtual Trade Fairs, Farmer Connect Portal, e-office, Hortinet Traceability system, Buyer Seller Meets, Reverse Buyer Seller Meets, product specific campaigns etc. APEDA has been closely working with state government for creating infrastructure and promotion of export from the state.

In order to harness the vast export potential of Karnataka, and as a part of the series of programmes being organized by APEDA under the "***Aazadi Ka Amrith Mahotsav***" celebrations, APEDA Bangalore Regional Office organized an **"Exporters Conclave" cum Exhibition** on 22nd September 2021 (Wednesday) at The Lalit Ashok, Bangalore. Around 200 participants comprising of important stakeholders viz., State Department Officials, Central Government Agencies, Exporters, FPO's attended the event. Around 25 stalls of various Agencies / Stakeholders were set up as a part of this event.

The Conclave was inaugurated by Ms. Shobha Karandlaje, Hon'ble Union Minister of State for Agriculture and Farmers Welfare, Govt. of India.

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ**

ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ):

**ದಿನಾಂಕ: 22.9.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 30 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 74 | ತೃಪ್ತಿಕರ | CO |
| 3 | ಕವಿಕ, ಮೈಸೂರುರಸ್ತೆ | 77 | ತೃಪ್ತಿಕರ | CO |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 40 | ಉತ್ತಮ | CO |

| | | | | |
|---|---|---|---|---|
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 85 | ತೃಪ್ತಿಕರ | CO |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 66 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 47 | ಉತ್ತಮ | $PM_{10}$ |
| **(22.9.2021 at 10.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 47 | ಉತ್ತಮ | $PM_{10}$ |
| 9 | ಪೀಣ್ಯ | 43 | ಉತ್ತಮ | $PM_{10}$ |
| 10 | ಬಿಟಿಎಂ ಲೇಔಟ್ | 89 | ತೃಪ್ತಿಕರ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

**AQI of the CAAQM stations established in Bengaluru City**

**Date : 22.9.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 30 | Good | $PM_{10}$ |
| 2 | Jayanagar $5^{th}$ Block, Shalini ground | 74 | Satisfactory | CO |
| 3 | KAVIKA, Mysore Road | 77 | Satisfactory | CO |
| 4 | Rajeev Gandhi Institute of Chest Disease, NIMHANS, Hombegowda Nagar | 40 | Good | CO |
| 5 | HSR Layout, near Central Silkboard | 85 | Satisfactory | CO |
| 6 | City Railway Station, Magestic, Bengaluru | 66 | Satisfactory | $PM_{10}$ |

| | | | | |
|---|---|---|---|---|
| 7 | Saneguruvanahalli, NisargaBhavan, KSPCB, Shivanagara | 47 | Good | $PM_{10}$ |
| **(22.9.2021 at 10.05 AM)** | | | | |
| 8 | BWSSB, Kadabesanahalli | 47 | Good | $PM_{10}$ |
| 9 | Peenya | 43 | Good | $PM_{10}$ |
| 10 | BTM Layout | 89 | Satisfactory | CO |

| **Category (Range)** | **Possible Health Impacts** | **Category (Range)** | **Possible Health Impacts** |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |